**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಲಯ ,**
**ಶ್ರೀರಂಗಪಟ್ಟಣ**

**ಸಿ.ಸಿ.101/2017**

| | |
|---|---|
| ಸಿ.ಡಬ್ಲ್ಯೂ : | 6 |
| ಪಿ.ಡಬ್ಲ್ಯೂ : | 5 |

| | | |
|---|---|---|
| ಸಾಕ್ಷಿದಾರರ ಹೆಸರು | : | ಮಹೇಶ್ ಎನ.ವಿ. |
| ತಂದೆ/ ಪತಿಯ ಹೆಸರು | : | ವೆಂಕಟಚಲಯ್ಯ |
| ವಯಸ್ಸು | : | 45 ವರ್ಷ |
| ವೃತ್ತಿ | : | ಪಿ.ಐ , DCRE, Mandya |
| ವಾಸ | : | ಮಂಡ್ಯ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 17.12.2025**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನಾನು ಏಪ್ರಿಲ್ 2015 ನೇ ಇಸವಿಯಿಂದ ಜೂನ್ 2016 ನೇ ಇಸವಿಯವರೆಗೆ ರಿಂದ ಕೆ.ಆರ್. ಸಾಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ28.04.2016 ರಂದು ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ನನ್ನ ಸಮಕ್ಷಮ ಹಾಜರು ಪಡಿಸಿದ್ದು, ಸದರಿ ದೂರಿನ ಸಾರಾಂಶದ ಮೇಲಿಂದ ಅಪರಾಧ ಸಂಖ್ಯೆ 95/2016 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ದೂರನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು

ಗುರುತಿಸಲಾಯಿತು. ಸಾಕ್ಷಿಗೆ ಈಗ ಪ್ರ.ವ.ವರದಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ನಂತರ ಘಟನಾ ಸ್ಥಳಕ್ಕೆ ಬೇಟಿ ನೀಡಿ ಚಾಸಾ.1 ರವರು ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ಚಾಸಾ.3 ಮತ್ತು 4 ರವರ ಸಮಕ್ಷಮ ಮದ್ಯಾಹ್ನ 2.00 ಗಂಟೆ ಯಿಂದ 2.30 ಗಂಟೆಯವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತೇನೆ . ಚಾಸಾ.1 ರವರು ಒಂದು ಕಾಡು ಮರದ ದೊಣ್ಣೆಯನ್ನು ನನ್ನ ಸಮಕ್ಷಮ ಹಾಜರ ಪಡಿಸಿದ್ದು ಅದನ್ನು ಅಮಾನತು ಪಡಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ಪಂಚನಾಮೆನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ.2 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಕಾಡು ಮರದ ದೊಣ್ಣೆಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಈಗಾಗಲೇ ಎಂ.ಒ.1 ಎಂದು ಗುರುತಿಸಲಾಗಿರುತ್ತದೆ.

ನಂತರ ಘಟನಾ ಸ್ಥಳದಲ್ಲಿ ಚಾಸಾ.1 ರವರ ಮುಂದುವರೆದ ಹೇಳಿಕೆಯನ್ನು ಹಾಗೂ ಚಾಸಾ.2 ರಿಂದ 4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.1 ರವರ ಮುಂದುವರೆದ ಹೇಳಿಕೆಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಚಾಸಾ.2 ರಿಂದ 4 ಮುಂದುವರೆದ ಹೇಳಿಕೆಗಳನ್ನು ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ 8 ಎಂದು, ಅವುಗಳಲ್ಲಿ ಇರುವ ಸಾಕ್ಷಿಯ ಸಹಿಗಳನ್ನು ಕ್ರಮವಾಗಿ ನಿಪಿ-6(ಎ) ರಿಂದ ನಿಪಿ.8(ಎ) ಎಂದು ಗುರುತಿಸಲಾಯಿತು.

ನಂತರ ವಾಪಾಸ್ಸು ಠಾಣೆಗೆ ಬಂದು ವಶಪಡಿಸಿಕೊಂಡ ಕಾಡು ಮರದ ದೊಣ್ಣೆಗೆ ಸಂಬಂಧಿಸಿದಂತೆ ಸ್ವತ್ತು ಪಟ್ಟಿಯನ್ನು ಸ್ವತ್ತು ಪಟ್ಟಿ ಸಂಖ್ಯೆ 66/2016 ರಂತೆ ತಯಾರಿಸಿ ಮಾನ್ಯ ನ್ಯಾಯಾಲಯದ ಆದೇಶಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಗೆ ಈಗ ಸ್ವತ್ತು ಪಟ್ಟಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-9 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ನಂತರ ನನಗೆ ವರ್ಗಾವಣೆ ಆದ ಕಾರಣ ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ. 7 ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ  ಪರ ವಕೀಲರಿಂದ</u>

ತಡವಾಗಿ ದೂರು ನೀಡಿರುವ ಬಗ್ಗೆ ನೀವು ವಿಚಾರಣೆ ಮಾಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಊರಿನಲ್ಲಿ ಹಿರಿಯರು ತೀರ್ಮಾನ ಮಾಡುತ್ತೇವೆ ಎಂದು ಹೇಳಿದ ಕಾರಣ ದೂರುದಾರರು ತಡವಾಗಿ ದೂರು ಸಲ್ಲಿಸಿರುತ್ತಾರೆ ಎಂದು ನುಡಿಯುತ್ತಾರೆ. ನೀವು ಊರಿನ ಹಿರಿಯರನ್ನು ವಿಚಾರಣೆ ಮಾಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಊರಿನಲ್ಲಿ 2 ಕುಟುಂಬದವರ ಬಗ್ಗೆ ಆಜು ಬಾಜುದಾರರನ್ನು ವಿಚಾರಣೆ ಮಾಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ನೀವು ದೂರುದಾರರು ನೀಡಿರುವ ದೂರಿನ ಆಧಾರದ ಮೇಲೆ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿದ್ದು ನೀವು ಖುದ್ದಾಗಿ ಗಲಾಟೆ  ಆಗಿರುವ ಬಗ್ಗೆ ವಿಚಾರಣೆ ಮಾಡಿರುವುದಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು  ಸ್ಥಳಕ್ಕೆ ಬೇಟಿ ಮಾಡಿ ಸಾಕ್ಷಿದಾರರನ್ನು ವಿಚಾರಣೆ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಸ್ಥಳಕ್ಕೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಅಲ್ಲಿ ಸಾಕ್ಷಿದಾರರ ವಿಚಾರಣೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಸ್ಥಳದಲ್ಲಿ ಯಾವುದೇ ಗಲಾಟೆಯು ಸಹಾ ನಡೆದಿರುವುದಿಲ್ಲ  ಎಂದರೆ ಸರಿಯಲ್ಲ.  ಪಂಚರರಿಗೆ ನಾನು ಲಿಖಿತ ನೋಟೀಸನ್ನು ನೀಡಿರುತ್ತೇನೆ.  ಘಟನಾ ಸ್ಥಳದಲ್ಲಿ ನಾನು ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಠಾಣೆಯಲ್ಲಿಯೇ ಕುಳಿತುಕೊಂಡು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಸ್ಥಳದಲ್ಲಿ ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಠಾಣೆಯಲ್ಲಿಯೇ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.